RNU AIR DHARWAD

# JUNE 19, 2024
# ALL INDIA RADIO- DHARWAD
# PRADESH SAMACHARA (KANNADA) 7:05 AM

ಮುಖ್ಯಾಂಶಗಳು

- ರಾಜ್ಯದ ಅಭಿವೃದ್ಧಿ ಮತ್ತು ಕೈಗಾರಿಕೆಗಳ ಉತ್ತೇಜನಕ್ಕೆ ಯೋಜನೆ ರೂಪಿಸಲಾಗುವುದು– ಕೇಂದ್ರ ಬೃಹತ ಕೈಗಾರಿಕೆ ಹಾಗೂ ಉಕ್ಕು ಖಾತೆ ಸಚಿವ ಎಚ್.ಡಿ.ಕುಮಾರಸ್ವಾಮಿ.

- ರೇಣುಕಾಸ್ವಾಮಿ ಕೊಲೆ ಪ್ರಕರಣ ; ಯಾವುದೇ ಒತ್ತಡಕ್ಕೆ ಒಳಗಾಗದೇ ತನಿಖೆ–ಗೃಹ ಸಚಿವ ಡಾ.ಜಿ.ಪರಮೇಶ್ವರ

- ವಿಧಾನಪರಿಷತ್ ಚುನಾವಣೆ: ಜಗದೀಶ್ ಶೆಟ್ಟರ್ ರಾಜೀನಾಮೆಯಿಂದ ತೆರವಾಗಿದ್ದ ಸ್ಥಾನಕ್ಕೆ ಜುಲೈ 12 ರಂದು ಮತದಾನ.

- ಪೆಟ್ರೋಲ್, ಡೀಸೆಲ್ ಮಾರಾಟ ತೆರಿಗೆ ಹೆಚ್ಚಳ ವಿರೋಧಿಸಿ ನಾಳೆ ರಾಜ್ಯಾದ್ಯಂತ ರಸ್ತೆ ರೋಖೋ ಚಳವಳಿ–ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೀಂದ್ರ.

- ಆಕಾಶವಾಣಿಯ ಜನಪ್ರಿಯ ಮಾಸಿಕ ಕಾರ್ಯಕ್ರಮ ಮನ್ ಕಿ ಬಾತ್ ಇದೇ 30 ರಂದು ಪುನರಾರಂಭ. ಮನದ ಮಾತು ಹಂಚಿಕೊಳ್ಳಲಿರುವ ಪ್ರಧಾನಿ.

ಈಗ ವಾರ್ತೆಗಳ ವಿವರ

*******

ದೇಶದ ಸರ್ವಾಂಗೀಣ ಅಭಿವೃದ್ಧಿಗೆ ಕೇಂದ್ರ ಸರ್ಕಾರ ಬದ್ಧವಾಗಿದ್ದು, ರಾಜ್ಯದ ಅಭಿವೃದ್ಧಿ ಮತ್ತು ಕೈಗಾರಿಕೆಗಳ ಉತ್ತೇಜನಕ್ಕೆ ಯೋಜನೆ ರೂಪಿಸಲಾಗುವುದು ಎಂದು ಕೇಂದ್ರ ಬೃಹತ ಕೈಗಾರಿಕೆ ಹಾಗೂ ಉಕ್ಕು ಖಾತೆ ಸಚಿವ ಎಚ್.ಡಿ.ಕುಮಾರಸ್ವಾಮಿ ಹೇಳಿದ್ದಾರೆ.

ಧಾರವಾಡ ಕೃಷಿ ವಿಶ್ವವಿದ್ಯಾಲಯದ ರೈತ ಜ್ಞಾನಾಭಿವೃದ್ಧಿ ಕೇಂದ್ರದಲ್ಲಿ ಕೇಂದ್ರ ಸರಕಾರದ ಪಿ.ಎಂ–ಕಿಸಾನ್ ಸಮ್ಮೇಳನದ ವರ್ಚುವಲ್ ಸಭೆಯಲ್ಲಿ ಭಾಗವಹಿಸಿ, ರೈತರನ್ನು ಉದ್ದೇಶಿಸಿ ಮಾತನಾಡಿದ ಅವರು, ಪ್ರಧಾನಮಂತ್ರಿ ಕೃಷಿ

ಸಮ್ಮಾನ ಯೋಜನೆ 2019 ರಲ್ಲಿ ಆರಂಭವಾಗಿದ್ದು, ಇಲ್ಲಿವರೆಗೆ ರೈತರಿಗೆ ಡಿಬಿಟಿ ಮೂಲಕ ಪ್ರತಿ ನಾಲ್ಕು ತಿಂಗಳಿಗೆ 2 ಸಾವಿರದಂತೆ ವರ್ಷಕ್ಕೆ ರೂ. 6 ಸಾವಿರ ರೂಪಾಯಿಗಳನ್ನು ನೇರವಾಗಿ ಅವರ ಖಾತೆಗೆ ಜಮೆ ಮಾಡಲಾಗಿದೆ ಎಂದರು.

ಧ್ವನಿ–30 ಸೆಕೆಂಡ್ಸ–ಕುಮಾರಸ್ವಾಮಿ

ಧಾರವಾಡ ಜಿಲ್ಲೆಯ 1 ಲಕ್ಷಕ್ಕೂ ಹೆಚ್ಚು ರೈತರಿಗೆ ಸುಮಾರು 20 ಕೋಟಿ ಪಿಎಂ–ಕಿಸಾನ ಸಮ್ಮಾನ ಯೋಜನೆಯ ಸಹಾಯಧನ ಇಂದು ಜಮೆ ಆಗುತ್ತಿದೆ ಎಂದು ಸಚಿವರು ತಿಳಿಸಿದರು.

*******

ಕರ್ನಾಟಕ ಸೇರಿದಂತೆ ನಾಲ್ಕು ರಾಜ್ಯಗಳಿಂದ ತೆರವಾಗಿದ್ದ ವಿಧಾನಪರಿ ʼತ್‌ನ ಐದು ಸ್ಥಾನಗಳಿಗೆ ಜುಲೈ 12 ರಂದು ಚುನಾವಣೆ ನಿಗದಿಯಾಗಿದೆ. ಕರ್ನಾಟಕ, ಬಿಹಾರ, ಉತ್ತರ ಪ್ರದೇಶದ ತಲಾ ಒಂದು ಸ್ಥಾನ ಹಾಗೂ ಆಂಧ್ರಪ್ರದೇಶದ ಎರಡು ಸ್ಥಾನಗಳಿಗೆ ಚುನಾವಣಾ ಆಯೋಗ ದಿನಾಂಕ ನಿಗದಿ ಮಾಡಿದೆ.

ಕರ್ನಾಟಕದ ವಿಧಾನಸಭೆಯಿಂದ ವಿಧಾನಪರಿ ʼತ್‌ಗೆ ಆಯ್ಕೆಯಾಗಿದ್ದ ಜಗದೀಶ್ ಶೆಟ್ಟರ್ ರಾಜೀನಾಮೆಯಿಂದ ತೆರವಾಗಿದ್ದ ಸ್ಥಾನಕ್ಕೆ ದಿನಾಂಕ ನಿಗದಿಯಾಗಿದೆ. ಜೂನ್ 25 ರಂದು ಅಧಿಸೂಚನೆ ಪ್ರಕಟವಾಗಲಿದ್ದು, ಜುಲೈ 2 ನಾಮಪತ್ರ ಸಲ್ಲಿಕೆಗೆ ಕೊನೆಯ ದಿನ. 3 ರಂದು ನಾಮಪತ್ರ ಪರಿಶೀಲನೆ ನಡೆಯಲಿದೆ. 12 ರಂದು ಬೆಳಗ್ಗೆ 9 ಗಂಟೆಯಿಂದ ಸಂಜೆ 4 ಗಂಟೆಯ ತನಕ ಮತದಾನ ನಡೆಯಲಿದ್ದು, ಅಂದು ಸಂಜೆ 5 ಗಂಟೆಯಿಂದ ಮತ ಎಣಿಕೆ ನಡೆಯಲಿದೆ ಎಂದು ಆಯೋಗ ತಿಳಿಸಿದೆ.

*******

ರೇಣುಕಾಸ್ವಾಮಿ ಕೊಲೆ ಪ್ರಕರಣಕ್ಕೆ ಸಂಬಂಧಪಟ್ಟಂತೆ ಸರ್ಕಾರ ಯಾವುದೇ ಒತ್ತಡಕ್ಕೆ ಒಳಗಾಗದೇ ತನಿಖೆ ಮಾಡುತ್ತಿದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ ಹೇಳಿದ್ದಾರೆ.

ಚಿತ್ರದುರ್ಗದಲ್ಲಿ ನಿನ್ನೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಕರಣಕ್ಕೆ ಸಂಬಂಧಪಟ್ಟಂತೆ ಈಗಾಗಲೇ ಸುಮಾರು 17 ಮಂದಿಯನ್ನು ಬಂಧಿಸಲಾಗಿದೆ. ಅವರನ್ನು ತನಿಖೆಗೆ ಒಳಪಡಿಸಿ, ಮಾಹಿತಿ ಸಂಗ್ರಹಿಸಲಾಗುತ್ತಿದೆ ಎಂದರು.

ಪ್ರಕರಣಕ್ಕೆ ಸಂಬಂಧಪಟ್ಟಂತೆ ಸರ್ಕಾರ ನ್ಯಾಯ ಕೊಡಿಸುವ ಕೆಲಸ ಮಾಡುತ್ತಿದೆ. ಯಾರು ಕೂಡ ಈ ಪ್ರಕರಣದಲ್ಲಿ ರಾಜಕೀಯ ಮಾಡುವುದು ಸರಿಯಲ್ಲ. ಕಾನೂನು ಪ್ರಕಾರ ಕ್ರಮ ಕೈಗೊಳ್ಳಲಾಗುವುದು. ಪೊಲೀಸರು ಸರಿಯಾಗಿ ತನಿಖೆ ನಡೆಸುತ್ತಿದ್ದು, ಪ್ರಕರಣವನ್ನು ಸಿಬಿಐಗೆ ವಹಿಸುವ ಅಗತ್ಯವಿಲ್ಲ ಎಂದು ಪರಮೇಶ್ವರ ಹೇಳಿದರು.

*******

ಆಡಳಿತ ವೈಫಲ್ಯ ಮುಚ್ಚಿಕೊಳ್ಳಲು ರಾಜ್ಯ ಸರ್ಕಾರ ಕೇಂದ್ರ ಸರ್ಕಾರದ ವಿರುದ್ಧ ಟೀಕೆ ಮಾಡುತ್ತಿದೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ್ ಆರೋಪಿಸಿದ್ದಾರೆ.

ಸಾಮಾಜಿಕ ಜಾಲ ತಾಣದಲ್ಲಿ ಸಂದೇಶ ದಾಖಲಿಸಿರುವ ಅವರು, ಯುಪಿಎ ಸರ್ಕಾರದ ಅವಧಿಯಲ್ಲಿ ಕೇಂದ್ರ ಸರ್ಕಾರ ರಾಜ್ಯಗಳಿಗೆ ಶೇಕಡ 32 ರಷ್ಟು ತೆರಿಗೆ ಹಂಚಿಕೆ ಮಾಡುತ್ತಿತ್ತು. ಕಳೆದ ಹತ್ತು ವರ್ಷಗಳ ಎನ್‌ಡಿಎ ಸರ್ಕಾರದ ಅವಧಿಯಲ್ಲಿ, ಏಪ್ರಿಲ್ 2014 ರಿಂದ ಏಪ್ರಿಲ್ 2024 ರವರೆಗೆ ರಾಜ್ಯಗಳಿಗೆ ಶೇಕಡ 42 ರಷ್ಟು ತೆರಿಗೆ ಹಂಚಿಕೆ ಮಾಡಿದೆ ಎಂದಿದ್ದಾರೆ.

ರಾಜ್ಯದಲ್ಲಿ ಅಧಿಕಾರದಲ್ಲಿರುವ ಕಾಂಗ್ರೆಸ್ ಸರ್ಕಾರ ಎಲ್ಲ ರಂಗಗಳಲ್ಲೂ ವಿಫಲವಾಗಿದೆ. ಜನ ನೆನಪಿನಲ್ಲಿ ಇಟ್ಟುಕೊಳ್ಳಬಹುದಾದ ಯಾವುದೆ ಒಂದು ಯೋಜನೆ ರೂಪಿಸಿ, ಅನುಷ್ಠಾನಗೊಳಿಸಿಲ್ಲ ಎಂದು ಅವರು ಟೀಕಿಸಿದ್ದಾರೆ.

*******

ರಾಜ್ಯದಲ್ಲಿ ಪೆಟ್ರೋಲ್ ಮತ್ತು ಡೀಸೆಲ್ ಮಾರಾಟ ತೆರಿಗೆ ಹೆಚ್ಚಳ ವಿರೋಧಿಸಿ ಬಿಜೆಪಿ ನಾಳೆ ರಾಜ್ಯಾದ್ಯಂತ ರಸ್ತೆ ರೋಖೋ ಚಳವಳಿ ನಡೆಸಲಿದೆ.

ತುಮಕೂರಿನಲ್ಲಿ ನಿನ್ನೆ ಸುದ್ದಿಗಾರರೊಂದಿಗೆ ಮಾತನಾಡಿ, ಈ ವಿಷಯ ತಿಳಿಸಿದ ಅವರು, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ಸರ್ಕಾರದ ಈ ಕ್ರಮ ವಿರೋಧಿಸಿ ಈಗಾಗಲೇ ಬಿಜೆಪಿ ಪ್ರತಿಭಟನೆ ಆರಂಭಿಸಿದೆ. ಆದರೆ ಸರ್ಕಾರ ಪ್ರತಿಭಟನೆಗೆ ಸ್ಪಂದನೆ ನೀಡದ ಕಾರಣ ಹೋರಾಟ ಮುಂದುವರೆಸುವ ಅನಿವಾರ್ಯತೆ ಇದೆ. ಹೀಗಾಗಿ ರಾಜ್ಯಾದ್ಯಂತ ರಸ್ತೆ ರೋಖೋ ಚಳವಳಿ ಹಮ್ಮಿಕೊಂಡಿದ್ದೇವೆ ಎಂದರು.

ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಒಂದು ವರ್ಷದಲ್ಲಿ ಹಾಲು, ವಿದ್ಯುತ್ ಅಬಕಾರಿ ಸುಂಕ, ಮುದ್ರಾಂಕ ಶುಲ್ಕ ಸೇರಿದಂತೆ ಇನ್ನಿತರೆ ಶುಲ್ಕಗಳನ್ನು ಏರಿಕೆ ಮಾಡಿದೆ. ಇದರಿಂದ ಸಂಗ್ರಹವಾಗುವ ಹಣ ಎಲ್ಲಿಗೆ ಹೋಗುತ್ತಿದೆ ಎಂದು ಅವರು ಪ್ರಶ್ನಿಸಿದರು.

*******

ಆದಿವಾಸಿಗಳಲ್ಲಿ ಹೆಚ್ಚು ಕಾಣಿಸಿಕೊಳ್ಳುವ ಸಿಕಲ್ ಸೆಲ್ ಅನೀಮಿಯಾ–ಕುಡಗೋಲು ರಕ್ತಹೀನತೆ ನಿರ್ಮೂಲನೆಗಾಗಿ ರೂಪಿಸಿರುವ ಪ್ರಾಜೆಕ್ಟ್ ಚಂದನ ಯೋಜನೆಗೆ ಆರೋಗ್ಯ ಸಚಿವ ದಿನೇಶ ಗುಂಡೂರಾವ್ ಇಂದು ಮೈಸೂರಿನಲ್ಲಿ ಚಾಲನೆ ನೀಡಲಿದ್ದಾರೆ.

ಭಾರತೀಯ ವಿಜ್ಞಾನ ಸಂಸ್ಥೆ ಹಾಗೂ ಇಂಡಿಯನ್ ಆಯಿಲ್ ಕಾರ್ಪೊರೇಶನ್ ರೂಪಿಸಿರುವ ಯೋಜನೆಯನ್ನು ರಾಜ್ಯ ಸರ್ಕಾರದ ಸಹಭಾಗಿತ್ವದಲ್ಲಿ 2 ವರ್ಷ ಅವಧಿಗೆ ಜಾರಿಗೊಳಿಸಲಾಗುತ್ತಿದೆ.

ಕಳೆದ ವರ್ಷ ಕೇಂದ್ರ ಸರ್ಕಾರ ದೇಶಧ 17 ರಾಜ್ಯಗಳಲ್ಲಿ ಸಿಕಲ್ ಸೆಲ್ ಅನಿಮಿಯಾ ಕಾರ್ಯಕ್ರಮ ಜಾರಿಗೊಳಿಸಿತ್ತು. ಅದರಲ್ಲಿ ರಾಜ್ಯದ ಕೊಡಗು, ಚಾಮರಾಜನಗರ, ಚಿಕ್ಕಮಗಳೂರು, ಮೈಸೂರು, ಉಡುಪಿ, ಉತ್ತರ ಕನ್ನಡ, ಮತ್ತು ದಕ್ಷಿಣ ಕನ್ನಡ ಜಿಲ್ಲೆಗಳು ಆಯ್ಕೆಯಾಗಿದ್ದವು.

*******

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ

*******

ಆಕಾಶವಾಣಿಯ ಜನಪ್ರಿಯ ಮಾಸಿಕ ಕಾರ್ಯಕ್ರಮ ಮನ್ ಕಿ ಬಾತ್ ಇದೇ 30 ರಂದು ಮತ್ತೇ ಪುನರಾರಂಭಗೊಳ್ಳಲಿದೆ.

ಚುನಾವಣಾ ಕಾರಣದಿಂದಾಗಿ ಕೆಲವು ತಿಂಗಳ ನಂತರ ಮನ್ ಕಿ ಬಾತ್ ಮತ್ತೇ ಬಂದಿದೆ ಎಂದು ತಿಳಿಸಲು ಸಂತೋಷವಾಗುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ.

'ಮನ್ ಕಿ ಬಾತ್' ಕಾರ್ಯಕ್ರಮದ 111 ನೇ ಸಂಚಿಕೆ ಇದಾಗಿದ್ದು, ಇದೇ ತಿಂಗಳ 30ರಂದು ಪ್ರಸಾರವಾಗಲಿದೆ. ಸತತ ಮೂರನೇ ಅವಧಿಗೆ ಪ್ರಧಾನಿಯಾಗಿ ನರೇಂದ್ರ ಮೋದಿ ಅವರು ಆಯ್ಕೆಯಾದ ನಂತರ ಪ್ರಸಾರವಾಗಲಿರುವ ಮೊದಲ ಸಂಚಿಕೆ ಇದಾಗಿದೆ.

ಕಾರ್ಯಕ್ರಮದಲ್ಲಿ ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು ದೇಶವಾಸಿಗಳೊಂದಿಗೆ ತಮ್ಮ ಅನಿಸಿಕೆ, ಅಭಿಪ್ರಾಯಗಳನ್ನು ಹಂಚಿಕೊಳ್ಳಲಿದ್ದಾರೆ. ಟೋಲ್ ಫ್ರೀ ಸಂಖ್ಯೆ 1800-11-70800 ಗೆ ಕರೆ ಮಾಡಿ ಅಥವಾ ನಮೋ ಆ್ಯಪ್ ಅಥವಾ ಮೈ ಜಿ.ಒ.ವಿ ಡಾಟ್ ಇನ್ ಮೂಲಕ, ಇದೇ 28 ರವರೆಗೆ ಸಾರ್ವಜನಿಕರು ತಮ್ಮ ಅನಿಸಿಕೆಗಳನ್ನು ಹಂಚಿಕೊಳ್ಳಬಹುದಾಗಿದೆ.

*******

ದೇಹ, ಮನಸ್ಸು ಮತ್ತು ಭಾವನೆಗಳನ್ನು ಸಮತೋಲನಗೊಳಿಸಲು ಯೋಗ ಉತ್ತಮ ಮಾರ್ಗ ಎಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅಭಿಪ್ರಾಯಪಟ್ಟಿದ್ದಾರೆ.

ಮೈಸೂರಿನ ಪ್ರಾದೇಶಿಕ ಶಿಕ್ಷಣ ಸಂಸ್ಥೆ, ಎನ್‌ಸಿಇಆರ್‌ಟಿ ವತಿಯಿಂದ ಆಯೋಜಿಸಿದ್ದ ರಾಷ್ಟ್ರೀಯ ಯೋಗ ಒಲಂಪಿಯಾಡ್–2024 ಉದ್ಘಾಟನಾ ಸಮಾರಂಭದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಪ್ರಾಚೀನ ಕಾಲದಿಂದಲೂ ಯೋಗ ನಮ್ಮ ಸಂಸ್ಕೃತಿಯ ಮಹತ್ವದ ಭಾಗವಾಗಿದೆ. ಯೋಗ ಭಾರತೀಯ ಸಂಪ್ರದಾಯ ಮತ್ತು ಸಂಸ್ಕೃತಿಯ ಅಮೂಲ್ಯ ಕೊಡುಗೆಯಾಗಿದೆ ಎಂದರು.

ಈ ವರ್ಷದ ಅಂತರಾಷ್ಟ್ರೀಯ ಯೋಗ ದಿನದ ಘೋಷವಾಕ್ಯ 'ಮಹಿಳಾ ಸಬಲೀಕರಣಕ್ಕಾಗಿ ಯೋಗ ಎನ್ನುವುದಾಗಿದ್ದು, ಮಹಿಳೆಯರ ದೈಹಿಕ, ಮಾನಸಿಕ, ಭಾವನಾತ್ಮಕ, ಸಾಮಾಜಿಕ ಮತ್ತು ಆಧ್ಯಾತ್ಮಿಕ ಯೋಗಕ್ಷೇಮ ಗಮನದಲ್ಲಿಟ್ಟುಕೊಂಡು ಅವರನ್ನು ಸಬಲೀಕರಣಗೊಳಿಸುವ ಒಂದು ಸಮಗ್ರ ಸಾಧನವಾಗಿದೆ ಎಂದು ರಾಜ್ಯಪಾಲರು ಹೇಳಿದರು.

*******

ದಾವಣಗೆರೆ ಜಿಲ್ಲೆಯಲ್ಲಿ ಕಂದಾಯ ಗ್ರಾಮಗಳೆಂದು ಘೋಷಣೆ ಮಾಡಲು 81 ಪ್ರಸ್ತಾವನೆಗಳು ಸಲ್ಲಿಕೆಯಾಗಿವೆ ಎಂದು ಜಿಲ್ಲಾಧಿಕಾರಿ ಡಾ.ಎಂ.ವಿ.ವೆಂಕಟೇಶ್ ತಿಳಿಸಿದ್ದಾರೆ.

ಪ್ರಸ್ತಾವನೆಗಳ ಪರೀಶೀಲನಾ ಕಾರ್ಯ ಮುಂದುವರಿದಿದೆ. ಸಲ್ಲಿಕೆಯಾಗಿರುವ 81 ಪ್ರಸ್ತಾವನೆಗಳ ಪೈಕಿ ಈಗಾಗಲೇ 35 ಕ್ಕೆ ಪ್ರಾಥಮಿಕ ಅಂತಿಮ ಅಧಿಸೂಚನೆ ಹೊರಡಿಸಲಾಗಿದ್ದು, ಇನ್ನುಳಿದ ಗ್ರಾಮಗಳಿಗೆ ಆದಷ್ಟು ಶೀಘ್ರವೇ ಅಧಿಸೂಚನೆ ಹೊರಡಿಸಲು ಕ್ರಮಕೈಗೊಳ್ಳಲಾಗುವುದು ಎಂದು ಹೇಳಿದ್ದಾರೆ.

*******

ಅತಿವೃಷ್ಟಿ ಹಾನಿ ನಿಯಂತ್ರಣಕ್ಕೆ ಜಿಲ್ಲೆಯ ವಿವಿಧ ಇಲಾಖೆಯ ಅಧಿಕಾರಿಗಳು ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಗದಗ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್., ಸೂಚಿಸಿದ್ದಾರೆ.

ಗದಗ ಜಿಲ್ಲಾಡಳಿತ ಭವನದಲ್ಲಿ ನಿನ್ನೆ ನಡೆದ ಪ್ರಸಕ್ತ ಸಾಲಿನ ಅತಿವೃಷ್ಟಿಯಿಂದಾದ ಹಾನಿ ಪರಿಶೀಲನಾ ಸಭೆಯಲ್ಲಿ ಈ ಸೂಚನೆ ನೀಡಿದ ಅವರು, ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವ ಮೂಲಕ ಜನ ಜಾನುವಾರುಗಳ ಜೀವಹಾನಿ ತಡೆಗೆ ಹಾಗೂ ಸಾರ್ವಜನಿಕರ ಆಸ್ತಿ ಪಾಸ್ತಿ ಹಾನಿ ತಪ್ಪಿಸಲು ಅಧಿಕಾರಿಗಳು ಮುಂದಾಗಬೇಕು ಎಂದು ಸೂಚನೆ ನೀಡಿದರು.

*******

ಜಿಲ್ಲೆಯನ್ನು ಡೆಂಗ್ಯೂ ಮುಕ್ತವಾಗಿಸಲು ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ಧಾರವಾಡ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ., ತಿಳಿಸಿದ್ದಾರೆ.

ಧಾರವಾಡದ ನಿವೇದಿತಾ ಆದರ್ಶ ವಿದ್ಯಾಲಯ ಆವರಣದಲ್ಲಿ ನಿನ್ನೆ ಆಯೋಜಿಸಿದ್ದ ಜಿಲ್ಲಾ ಮಟ್ಟದ ಡೆಂಗ್ಯೂ ಜನಜಾಗೃತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

*******

**ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು**

ರಾಜ್ಯದ ಅಭಿವೃದ್ಧಿ ಮತ್ತು ಕೈಗಾರಿಕೆಗಳ ಉತ್ತೇಜನಕ್ಕೆ ಯೋಜನೆ ರೂಪಿಸಲಾಗುವುದು ಕೇಂದ್ರ ಬೃಹತ ಕೈಗಾರಿಕೆ ಹಾಗೂ ಉಕ್ಕು ಖಾತೆ ಸಚಿವ ಎಚ್.ಡಿ.ಕುಮಾರಸ್ವಾಮಿ.

ರೇಣುಕಾಸ್ವಾಮಿ ಕೊಲೆ ಪ್ರಕರಣ : ಯಾವುದೇ ಒತ್ತಡಕ್ಕೆ ಒಳಗಾಗದೇ ತನಿಖೆ–ಗೃಹ ಸಚಿವ ಡಾ.ಜಿ.ಪರಮೇಶ್ವರ

ವಿಧಾನಪರಿಷತ್ ಚುನಾವಣೆ: ಜಗದೀಶ್ ಶೆಟ್ಟರ್ ರಾಜೀನಾಮೆಯಿಂದ ತೆರವಾಗಿದ್ದ ಸ್ಥಾನಕ್ಕೆ ಜುಲೈ 12 ರಂದು ಮತದಾನ.

ಪೆಟ್ರೋಲ್, ಡೀಸೆಲ್ ಮಾರಾಟ ತೆರಿಗೆ ಹೆಚ್ಚಳ ವಿರೋಧಿಸಿ ನಾಳೆ ರಾಜ್ಯಾದ್ಯಂತ ರಸ್ತೆ ರೋಖೋ ಚಳವಳಿ–ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ.

ಆಕಾಶವಾಣಿಯ ಜನಪ್ರಿಯ ಮಾಸಿಕ ಕಾರ್ಯಕ್ರಮ ಮನ್ ಕಿ ಬಾತ್ ಇದೇ 30 ರಂದು ಪುನರಾರಂಭ. ಮನದ ಮಾತು ಹಂಚಿಕೊಳ್ಳಲಿರುವ ಪ್ರಧಾನಿ.

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು
ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 7 ಗಂಟೆ 35 ನಿಮಿಷಕ್ಕೆ

******